ನಿಯಮ-72
ಕ್ರ - 140 ರಂಜ್ಯೋತಿ

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ್, ಇವರ ನಿಯಮ 72ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.**

**ವಿಷಯ:**

2022-23ನೇ ಸಾಲಿನಲ್ಲಿ ವಿನೂತನ ಮಾದರಿ ನೂತನ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಜಿಲ್ಲೆಗಳಾದ ಕೊಪ್ಪಳ, ಬೀದರ್, ಬಾಗಲಕೋಟೆ, ಹಾವೇರಿ, ಹಾಸನ, ಕೊಡಗು ಮತ್ತುಚಾಮರಾಜನಗರ, ಸದರಿ ವಿಶ್ವವಿದ್ಯಾಲಯಗಳಿಗೆ ಯಾವುದೇ ರೀತಿಯ ಪ್ರಾಧ್ಯಾಪಕರು, ಕುಲಪತಿಗಳ ನೇಮಕವಾಗಿಲ್ಲ. ಯಾವುದೇ ಜಮೀನು ಖರೀದಿಗೆ ಅವಕಾಶ ನೀಡಿಲ್ಲ. ಸರಿಯಾದ ಅನುದಾನ ನೀಡಿರುವುದಿಲ್ಲ. ನೂತನ ವಿಶ್ವವಿದ್ಯಾಲಯಕ್ಕೆ ಅದರದೇ ಆದ ಕಟ್ಟಡ ರಚನೆಗೆ ಅವಕಾಶ ನೀಡಿರುವುದಿಲ್ಲ ಎಂಬ ವಿಷಯದ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

2022-23 ನೇ ಸಾಲಿನ ಆಯವ್ಯಯದಲ್ಲಿ ವಿನೂತನ ಮಾದರಿಯ 07 ವಿಶ್ವವಿದ್ಯಾಲಯಗಳನ್ನು ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸ್ಥಾಪಿಸಲಾಗುವುದು. ಈ ವಿಶ್ವವಿದ್ಯಾಲಯಗಳು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಬಳಸುವ ಈ ವಿಶ್ವವಿದ್ಯಾಲಯಗಳಿಗೆ ವಾರ್ಷಿಕ ತಲಾ ರೂ.2.00 ಕೋಟಿಗಳ ಆವರ್ತಕ ವೆಚ್ಚ ಬಳಸಿ ಕಾರ್ಯನಿರ್ವಹಿಸಲಿದೆ ಎಂದು ಘೋಷಿಸಲಾಗಿದೆ. ಅದರನ್ವಯ ಸರ್ಕಾರದ ಆದೇಶ ಸಂ. ಇಡಿ 81 ಯುಎನ್ಇ 2022, ದಿನಾಂಕ:05.11.2022 ಮತ್ತು ತಿದ್ದುಪಡಿ ಆದೇಶ ದಿನಾಂಕ:08.11.2022 ಹಾಗೂ ಆದೇಶ ಸಂಖ್ಯೆ: 30.11.2022 ರನ್ವಯ ನೂತನ 7 ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲಾಗಿರುತ್ತದೆ.

ನೂತನ 07 ವಿಶ್ವವಿದ್ಯಾಲಯಗಳ ಕೇಂದ್ರಸ್ಥಳಗಳನ್ನು ಆಯಾ ವಿಶ್ವವಿದ್ಯಾಲಯಗಳ ಸ್ನಾತಕೋತ್ತರ ಕೇಂದ್ರಗಳಲ್ಲಿ ಸ್ಥಾಪಿಸಿ, ಆದೇಶ ಹೊರಡಿಸಿರುವುದರಿಂದ, ಪ್ರಾಧ್ಯಾಪಕರ ನೇಮಕ, ಜಮೀನು ಖರೀದಿ, ಕಟ್ಟಡ ರಚನೆ ಕುರಿತಂತೆ ಪ್ರಶ್ನೆ ಉದ್ಭವಿಸುವುದಿಲ್ಲ.

ಮುಂದುವರೆದು, ಸರ್ಕಾರದ ಅಧಿಸೂಚನೆ ಸಂ. ಇಡಿ 81 ಯುಎನ್ಇ 2022, ದಿನಾಂಕ:10.11.2022 ರಲ್ಲಿ ನೂತನ 07 ವಿಶ್ವವಿದ್ಯಾಲಯಗಳಿಗೆ ಪ್ರಥಮ ಕುಲಪತಿಗಳ ನೇಮಕಾತಿ ಸಂಬಂಧ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಇವರ ಅಧ್ಯಕ್ಷತೆಯಲ್ಲಿ ಶೋಧನಾ ಸಮಿತಿಯನ್ನು ರಚಿಸಿ ಆದೇಶಿಸಿದೆ. ಅದರನ್ವಯ ಪ್ರಥಮ ಕುಲಪತಿಗಳ ನೇಮಕಾತಿ ಕುರಿತು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಿ, ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದೆ. ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ: ಇಡಿ 343 ಯುಎನ್ಇ 2022

(ಡಾ: ಅಶ್ವತ್ಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಐಟಿ - ಬಿಟಿ, ವಿಜ್ಞಾನ
ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಮತ್ತು ಕೌಶಲ್ಯಾಭಿವೃದ್ಧಿ,
ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರು.